ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಮಹಾರಾಷ್ಟ್ರದ ಡ್ಯಾಂಗಳಿಂದ ಭೀಮಾ ನದಿಗೆ ಭಾರಿ ಪ್ರಮಾಣದಲ್ಲಿ ನೀರು ಹರಿಸಿರುವುದರ ಬಗ್ಗೆ

ಶ್ರೀ ಬಿ. ಜಿ. ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

392 (369) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮಹಾರಾಷ್ಟ್ರದ ಡ್ಯಾಂಗಳಿಂದ ಭೀಮಾ ನದಿಗೆ ಭಾರೀ ಪ್ರಮಾಣದಲ್ಲಿ ನೀರು ಹರಿಸಿರುವುದರಿಂದ ಕರ್ನಾಟಕ ನದಿ ತೀರದ ಗ್ರಾಮಗಳು ತತ್ತರಿಸಿ ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಮಹಾರಾಷ್ಟ್ರದ ಡ್ಯಾಂಗಳಿಂದ ನೀರು ಬಿಡುವ ಮೊದಲು ಕರ್ನಾಟಕಕ್ಕೆ ಮಾಹಿತಿ ನೀಡಲಾಗಿದೆಯೇ; ನೀಡಿದ್ದಲ್ಲಿ, ಅದರ ಸಂಪೂರ್ಣ ವಿವರ ನೀಡುವುದು;

(ಇ) ಏಕಾಏಕಿ ಮಹಾರಾಷ್ಟ್ರದ ಡ್ಯಾಂಗಳಿಂದ ನೀರು ಬಿಡುವ ಮೊದಲು ಅಗತ್ಯ ಮಾಹಿತಿ ನೀಡುವ ಹಿನ್ನೆಲೆಯಲ್ಲಿ ಎರಡೂ ರಾಜ್ಯಗಳ ನಡುವೆ ಸಮನ್ವಯ ಸಮಿತಿ ರಚನೆ ಮಾಡುವ ಅಗತ್ಯತೆ ಕುರಿತು ಸರ್ಕಾರ ಮಹಾರಾಷ್ಟ್ರದೊಂದಿಗೆ ಚರ್ಚೆ ನಡೆಸಲು ಉದ್ದೇಶಿಸಿದೆಯೇ? (ಉದ್ದೇಶಿಸಿದ್ದಲ್ಲಿ, ವಿವರ ನೀಡುವುದು)